Akashvani: Bangalore
National Bulletin In Kannada
22.01.2026 : 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

22.01.2026 : 13.10hrs
********

**ಮುಖ್ಯಾಂಶಗಳು:**

1. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಪುನರ್ ರಚನೆಗೆ ಜಿ-೪ ರಾಷ್ಟ್ರಗಳ ಒತ್ತಾಯ
2. ಭಾರತ-ಅಮೆರಿಕ ಶೀಘ್ರದಲ್ಲೇ ವ್ಯಾಪಾರ ಒಪ್ಪಂದಕ್ಕೆ ಬರಲಿವೆ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಶ್ವಾಸ
3. ಮುಂದಿನ ವಾರ ನವದೆಹಲಿಯಲ್ಲಿ ನಡೆಯಲಿರುವ ಇಯು-ಭಾರತ ಶೃಂಗಸಭೆಯಲ್ಲಿ ನೂತನ ರಕ್ಷಣಾ ಪಾಲುದಾರಿಕೆಗೆ ಸಹಿ ನಿರೀಕ್ಷೆ
4. ಇಂಡೋನೇಷಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿ ; ಕ್ವಾರ್ಟರ್ ಫೈನಲ್‌ಗೆ ಪಿ.ವಿ.ಸಿಂಧು, ಲಕ್ಷ್ಯ ಸೇನ್ ಲಗ್ಗೆ
5. ಡಬ್ಲ್ಯು ಪಿಎಲ್ ಟಿ-೨೦ ಕ್ರಿಕೆಟ್ ; ೧೪ನೇ ಪಂದ್ಯದಲ್ಲಿಂದು ಯುಪಿ ವಾರಿಯರ್ಸ್-ಗುಜರಾತ್ ಜೈಂಟ್ಸ್ ಮುಖಾಮುಖಿ

***********

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯನ್ನು ಪುನರ್ ರಚಿಸಲು ಆರಂಭಿಕ ಕ್ರಮವಾಗಿ ಜಿ-೪ ರಾಷ್ಟ್ರಗಳು ಒಂದು ಮಾದರಿಯನ್ನು ಪ್ರಸ್ತುತಪಡಿಸಿವೆ.ವಿಶ್ವಸಂಸ್ಥೆಯ ಅತ್ಯನ್ನತ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆಯಾದ ಭದ್ರತಾ ಮಂಡಳಿಯಲ್ಲಿ ಸುಧಾರಣೆಗಳನ್ನು ತರಲು ವಿಳಂಬ ಮಾಡುವುದರಿಂದ ಹೆಚ್ಚಿನ ತೊಂದರೆ ಉಂಟಾಗುತ್ತದೆ ಎಂದು ಜಿ-೪ ರಾಷ್ಟ್ರಗಳು ಎಚ್ಚರಿಸಿವೆ.ನ್ಯೂಯಾರ್ಕ್ ನಗರದ ವಿಶ್ವಸಂಸ್ಥೆ ಪ್ರಧಾನ ಕಚೇರಿಯಲ್ಲಿ ನಡೆದ ಭದ್ರತಾ ಮಂಡಳಿಯ ಸುಧಾರಣೆಗಳಿಗಾಗಿ ಅಂತರ್ ಸರ್ಕಾರಿ ಮಾತುಕತೆಗಳಲ್ಲಿ ಜಿ-೪ ರಾಷ್ಟ್ರದ ಪರವಾಗಿ ಭಾರತದ ಖಾಯಂ ಪ್ರತಿನಿಧಿ ಪಿ.ಹರೀಶ್ ಅಭಿಪ್ರಾಯ ವ್ಯಕ್ತಪಡಿಸಿದರು. ಜಗತ್ತಿನಲ್ಲಿ ಸಂಘರ್ಷಗಳಿಂದಾಗಿ ಪ್ರತಿದಿನ ಲೆಕ್ಕವಿಲ್ಲದಷ್ಟು ಮುಗ್ಧಜೀವಿಗಳು ಬಲಿಯಾಗುತ್ತಿವೆ. ಉಗ್ರ ಸಂಘರ್ಷವನ್ನು ನಿಭಾಯಿಸಲು ಅಸಮರ್ಥತೆಯಿಂದಾಗಿ ವಿಶ್ವಸಂಸ್ಥೆಯ ವಿಶ್ವಾಸಾರ್ಹತೆ ಮತ್ತು ಪರಿಣಾಮಕಾರಿತ್ವವನ್ನು ಪ್ರಶ್ನಿಸಲಾಗುತ್ತಿದೆ. ದಶಕಗಳಿಂದ ಕೆಲವು ದೇಶಗಳು ಅಡೆತಡೆಗಳನ್ನು ಒಡ್ಡುತ್ತಿವೆ ಮತ್ತು ಮುಂದಿನ ಕ್ರಮಕ್ಕೆ ಅಡ್ಡಿಯಾಗುತ್ತಿವೆ. ಇದರಿಂದಾಗಿ ಭದ್ರತಾ ಮಂಡಳಿಯ ವೈಫಲ್ಯಕ್ಕೆ ಕೊಡುಗೆ ನೀಡುತ್ತಿವೆ ಎಂದು ಪಿ.ಹರೀಶ್ ಹೇಳಿದರು. ಭಾರತ, ಬ್ರೆಜಿಲ್, ಜರ್ಮನಿ ಮತ್ತು ಜಪಾನ್ ಜಿ-೪ ರಾಷ್ಟ್ರಗಳ ಗುಂಪಿಗೆ ಸೇರಿವೆ.

***********

ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಪ್ರಧಾನಿ ನರೇಂದ್ರ ಮೋದಿ ಅವರನ್ನು ಶ್ಲಾಘಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಪ್ತಮಿತ್ರ ಎಂದು ಕರೆದ ಟ್ರಂಪ್, ಭಾರತ ಮತ್ತು ಅಮೆರಿಕ ಶೀಘ್ರದಲ್ಲೇ ವ್ಯಾಪಾರ ಒಪ್ಪಂದಕ್ಕೆ ಬರಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ವ್ಯಾಪಾರ ಒಪ್ಪಂದದ ಬಿಕ್ಕಟ್ಟನ್ನು ಪರಿಹರಿಸುವ ಗುರಿಯನ್ನು ಹೊಂದಿರುವ ಮಾತುಕತೆಗಳನ್ನು ಭಾರತ ಮತ್ತು ಅಮೆರಿಕ ಮುಂದುವರಿಸುತ್ತಿರುವ ಈ ಹೊತ್ತಿನಲ್ಲಿ ಈ ಹೇಳಿಕೆಗಳು ಬಂದಿವೆ. ಉಭಯ ದೇಶಗಳ ನಡುವಿನ ವ್ಯಾಪಾರ ಸಂಬಂಧಗಳು ಹದಗೆಟ್ಟಿರುವ ನಡುವೆಯೇ ಡೊನಾಲ್ಡ್

ಟ್ರಂಪ್ ಅವರ ಈ ಹೇಳಿಕೆಯು ಬಾಂಧವ್ಯವನ್ನು ಮತ್ತೊಮ್ಮೆ ಬಲಪಡಿಸುವ ವಿಶ್ವಾಸ ವ್ಯಕ್ತವಾಗಿದೆ. ಭಾರತ ಮತ್ತು ಅಮೆರಿಕ ಉತ್ತಮ ವ್ಯಾಪಾರ ಒಪ್ಪಂದಕ್ಕೆ ಬರಲಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

***********

ಗ್ರೀನ್‌ಲ್ಯಾಂಡ್ ಅನ್ನು ತಮ್ಮ ಹಿಡಿತಕ್ಕೆ ತೆಗೆದುಕೊಳ್ಳಲು ಬಲಪ್ರಯೋಗ ಮಾಡುವುದಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದರೆ ಆರ್ಕ್ಟಿಕ್ ದ್ವೀಪವಾದ ಗ್ರೀನ್‌ಲ್ಯಾಂಡ್ ಮಾಲೀಕತ್ವವನ್ನು ಅಮೆರಿಕಗೆ ನೀಡಬೇಕೆಂಬ ತಮ್ಮ ಬೇಡಿಕೆಯನ್ನು ಪುನರುಚ್ಚರಿಸಿದ್ದಾರೆ. ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆ ಉದ್ದೇಶಿಸಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಗ್ರೀನ್‌ಲ್ಯಾಂಡ್ ಅನ್ನು ಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಚರ್ಚಿಸಲು ತಕ್ಷಣದ ಮಾತುಕತೆಗಳನ್ನು ಬಯಸುವುದಾಗಿ ಹೇಳಿದರು. ಗ್ರೀನ್‌ಲ್ಯಾಂಡ್ ಅಮೆರಿಕದ ಮಿತ್ರ ರಾಷ್ಟ್ರವಾದ ಡೆನ್ಮಾರ್ಕ್‌ನ ಅರೆ ಸ್ವಾಯತ್ತ ಪ್ರದೇಶವಾಗಿದೆ. ೩೨ ನ್ಯಾಟೋ ದೇಶಗಳಲ್ಲಿ ಅಮೆರಿಕ ಮತ್ತು ಡೆನ್ಮಾರ್ಕ್ ಸೇರಿವೆ. ಡೆನ್ಮಾರ್ಕ್‌ನಿಂದ ಗ್ರೀನ್‌ಲ್ಯಾಂಡ್ ಅನ್ನು ಸ್ವಾಧೀನಪಡಿಸಿಕೊಳ್ಳುವ ವಿಚಾರವನ್ನು ಟ್ರಂಪ್ ಪದೇ ಪದೆ ಎತ್ತಿದ್ದಾರೆ. ೨೦೧೯ರಲ್ಲಿ ಅಮೆರಿಕ ಅಧ್ಯಕ್ಷರಾಗಿ ತಮ್ಮ ಮೊದಲ ಅವಧಿಯಲ್ಲಿ ಈ ಕಲ್ಪನೆಯನ್ನು ಅವರು ಮಂಡಿಸಿದ್ದರು. ಈಗಾಗಲೇ ಮಿಲಿಟರಿ ನೆಲೆಯನ್ನು ನಿರ್ವಹಿಸುತ್ತಿರುವ ಅಮೆರಿಕದ ಭಾಗವಾಗಲು ಬಯಸುವುದಿಲ್ಲ ಎಂದು ಗ್ರೀನ್‌ಲ್ಯಾಂಡ್ ಸಮರ್ಥಿಸಿಕೊಂಡಿದೆ. ಈ ಕುರಿತು ಪ್ರತಿಕ್ರಿಯಿಸಿರುವ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಈ ವಿಚಾರ ರಷ್ಯಾಗೆ ಸಂಬಂಧಿಸಿದ್ದಲ್ಲ. ಅಮೆರಿಕ ಮತ್ತು ಡೆನ್ಮಾರ್ಕ್ ಈ ವಿಷಯವನ್ನು ತಮ್ಮಲ್ಲೇ ಬಗೆಹರಿಸಿಕೊಳ್ಳುತ್ತವೆ ಎಂದು ಹೇಳಿದ್ದಾರೆ.

***********

ಕಳೆದ ದಶಕದಲ್ಲಿ ಭಾರತ ಉದಯೋನ್ಮುಖ ಸ್ಥಿತಿಯಿಂದ ಪ್ರಮುಖ ಜಾಗತಿಕ ಆರ್ಥಿಕ ಶಕ್ತಯಾಗಿ ನಿಜವಾದ ಪರಿವರ್ತನೆಗೆ ಸಾಕ್ಷಿಯಾಗಿದೆ. ಇದಕ್ಕೆ ಬಲವಾದ ಬೆಳವಣಿಗೆ ಮತ್ತು ವ್ಯಾಪಕ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಕಾರಣವಾಗಿದೆ. ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ.ರಾಮಮೋಹನ್ ನಾಯ್ಡು ಮತ್ತು ಗುಜರಾತ್ ಉಪಮುಖ್ಯಮಂತ್ರಿ ಹರ್ಷ ಸಂಘವಿ ಅವರು ಸ್ವಿಜರ್‌ಲ್ಯಾಂಡ್‌ನ ದಾವೋಸ್‌ನಲ್ಲಿ ನಡೆಯುತ್ತಿರುವ ವಿಶ್ವ ಆರ್ಥಿಕ ವೇದಿಕೆಯ ವಾರ್ಷಿಕ ಸಭೆಯ ಅಧಿವೇಶನ ಉದ್ದೇಶಿಸಿ ಈ ವಿಷಯ ತಿಳಿಸಿದರು. ಭಾರತದ ಅಭಿವೃದ್ಧಿ ಮಾದರಿಯಲ್ಲಿ ಅತ್ಯಂತ ಪರಿಣಾಮಕಾರಿ ಬದಲಾವಣೆಯಲ್ಲಿ ಒಂದು ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದ ರಚನೆಯಾಗಿದೆ. ಡಿಜಿಟಲ್ ಗುರುತು, ನೈಜ ಸಮಯದ ಪಾವತಿಗಳು ಹಾಗೂ ಒಪ್ಪಿಗೆ ಆಧಾರಿತ ಡೇಟಾ ಹಂಚಿಕೆಯಂತಹ ವೇದಿಕೆಗಳು ಭಾರತೀಯ ಆರ್ಥಿಕತೆಗೆ ಒಂದು ನಿರ್ದಿಷ್ಟ ಪ್ರಯೋಜನವನ್ನು ನೀಡಿವೆ ಎಂದು ಸಚಿವ ರಾಮ್‌ಮೋಹನ್ ನಾಯ್ಡು ತಿಳಿಸಿದರು.

***********

ಮುಂದಿನ ವಾರ ನವದೆಹಲಿಯಲ್ಲಿ ನಡೆಯಲಿರುವ ಐರೋಪ್ಯ ಒಕ್ಕೂಟ ಇಯು-ಭಾರತ ಶೃಂಗಸಭೆಯಲ್ಲಿ ನೂತನ ರಕ್ಷಣಾ ಪಾಲುದಾರಿಕೆಗೆ ಸಹಿ ಹಾಕುವ ಮೂಲಕ ಭಾರತ ಮತ್ತು ಐರೋಪ್ಯ ಒಕ್ಕೂಟವು ತಮ್ಮ ಕಾರ್ಯತಂತ್ರದ ಸಂಬಂಧವನ್ನು ಬಲಪಡಿಸಲು ಸಜ್ಜಾಗಿವೆ. ಯೂರೋಪಿಯನ್ ಒಕ್ಕೂಟದ ವಿದೇಶಾಂಗ ನೀತಿ ಮುಖ್ಯಸ್ಥೆ ಕಾಜಾ ಕಲ್ಲಾಸ್ ನಿನ್ನೆ ಸಂಜೆ ಫ್ರಾನ್ಸ್‌ನ ಸ್ಟ್ರಾಸ್‌ಬರ್ಗ್‌ನಲ್ಲಿ ಐರೋಪ್ಯ ಒಕ್ಕೂಟದ ಸಂಸತ್‌ಅನ್ನು ಉದ್ದೇಶಿಸಿ ಮಾತನಾಡುತ್ತ ಈ ಘೋಷಣೆ ಮಾಡಿದರು. ಈ ಒಪ್ಪಂದವು ಸಮುದ್ರ ಭದ್ರತೆ, ಭಯೋತ್ಪಾದನೆ ನಿಗ್ರಹ, ಸೈಬರ್ ರಕ್ಷಣೆ ಮತ್ತು ಜಾಗೃತಿ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ

ಭಾರತ ಮತ್ತು ಐರೋಪ್ಯ ರಾಷ್ಟ್ರಗಳ ನಡುವಿನ ಸಹಕಾರವನ್ನು ಬಲಗೊಳಿಸುತ್ತದೆ. ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಸ್ಥಿರತೆಯ ಮೇಲೆ ಈ ಒಪ್ಪಂದ ಕೇಂದ್ರೀಕರಿಸುತ್ತದೆ. ಮುಂದಿನ ವಾರ ಯೂರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೆಯೆನ್ ಯೂರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯಾ ಕೋಸ್ಟಾ, ಭಾರತಕ್ಕೆ ಭೇಟಿ ನೀಡುವ ಸಂದರ್ಭದಲ್ಲಿ ಈ ಪಾಲುದಾರಿಕೆಗೆ ಸಹಿ ಹಾಕಲಾಗುತ್ತದೆ. ಇವರು ನವದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

***********

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಸುಪ್ರೀಂ ಕೋರ್ಟ್‌ನ ಆದೇಶವನ್ನು ಜಾರಿಗೆ ತರಲು ಚುನಾವಣಾ ಆಯೋಗ ನಿರ್ದೇಶನಗಳನ್ನು ನೀಡಿದೆ. ಇದು ಹೆಸರುಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸುವುದನ್ನು ಕಡ್ಡಾಯಗೊಳಿಸುತ್ತದೆ ಹಾಗೂ ಬಾಧಿತ ಮತದಾರರಿಗೆ ದಾಖಲೆಗಳನ್ನು ಸಲ್ಲಿಸಲು ಮತ್ತು ನಿರ್ದಿಷ್ಟ ಸಮಯದೊಳಗೆ ವಿಚಾರಣೆಗೆ ಒಳಪಡುವ ಅವಕಾಶಗಳನ್ನು ಒದಗಿಸುತ್ತದೆ. ಪ್ರಸ್ತುತ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ ೨೦೨೬ ಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನ ಈ ತಿಂಗಳ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಆಯೋಗ, ಪಶ್ಚಿಮ ಬಂಗಾಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ.

***********

ಬಿಜೆಪಿ ಹಿರಿಯ ನಾಯಕ ಕೇಂದ್ರ ಸಚಿವ ಪಿಯೂಷ್ ಗೋಯಲ್ ಅವರು ಚೆನ್ನೈನಲ್ಲಿಂದು ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಮತ್ತು ತಮಿಳುನಾಡು ವಿರೋಧಪಕ್ಷದ ನಾಯಕ ಎ.ಪಳನಿಸ್ವಾಮಿ ಅವರನ್ನು ಅವರ ಸ್ವಗೃಹದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು. ಈ ವೇಳೆ ತಮಿಳುನಾಡು ಬಿಜೆಪಿ ಮಾಜಿ ಮುಖ್ಯಸ್ಥ ಹಾಗೂ ಸಚಿವ ಡಾ.ಎಲ್. ಮುರುಗನ್, ತಮಿಳುನಾಡು ಬಿಜೆಪಿ ಮುಖ್ಯಸ್ಥ ಎನ್.ನಾಗೇಂದ್ರನ್ ಸೇರಿದಂತೆ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು. ತಮಿಳುನಾಡು ಚುನಾವಣೆಯ ಉಸ್ತುವಾರಿ ವಹಿಸಿಕೊಂಡಿರುವ ಪಿಯೂಷ್ ಗೋಯಲ್ ಅವರು, ಎನ್‌ಡಿಎ ಮಿತ್ರಪಕ್ಷಗಳೊಂದಿಗೆ ಮಾತುಕತೆ ನಡೆಸಲು ಚೆನ್ನೈನಲ್ಲಿದ್ದಾರೆ. ಮುಂದಿನ ತಮಿಳುನಾಡು ವಿಧಾನಸಭೆ ಚುನಾವಣೆಗೆ ಎನ್‌ಡಿಎ ಮೈತ್ರಿಕೂಟವನ್ನು ಎಐಎಡಿಎಂಕೆ ಮುನ್ನಡೆಸುವುದರಿಂದ ಈ ಸಭೆ ಮಹತ್ವ ಪಡೆದಿದೆ.

***********

ಇಂಡೋನೇಷ್ಯಾದಲ್ಲಿ ನಡೆಯುತ್ತಿರುವ, ಇಂಡೋನೇಷ್ಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ಭಾರತೀಯ ಶಟ್ಲರ್‌ಗಳಾದ ಪಿ.ವಿ.ಸಿಂಧು ಮತ್ತು ಲಕ್ಷ್ಯ ಸೇನ್ ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಪುರುಷರ ಸಿಂಗಲ್ಸ್ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಲಕ್ಷ್ಯಸೇನ್, ಹಾಂಗ್ ಕಾಂಗ್ ಚೀನಾದ ಜೇಸನ್ ಗುಣವಾನ್ ಅವರನ್ನು ೨೧-೧೦ ೨೧-೧೧ ಅಂತರದಿಂದ ಸೋಲಿಸಿದರು. ಮಹಿಳಾ ಸಿಂಗಲ್ಸ್‌ನಲ್ಲಿ, ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು, ಪ್ರಿ-ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಡೆನ್ಮಾರ್ಕ್‌ನ ಲೈನ್ ಹೊಜ್‌ಮಾರ್ಕ್ ಕ್ಜೆರ್‌ಫೆಲ್ಡ್ ಅವರನ್ನು ೨೧-೧೯ ೨೧-೧೮ ಅಂತರದಿಂದ ಮಣಿಸಿದರು. ಪಿ.ವಿ.ಸಿಂಧು ಕ್ವಾರ್ಟರ್ ಫೈನಲ್‌ನಲ್ಲಿ ವಿಶ್ವದ ನಾಲ್ಕನೇ ಶ್ರೇಯಾಂಕದ ಚೀನಾದ ಚೆನ್ ಯು ಫೀ ಅವರನ್ನು ಎದುರಿಸಲಿದ್ದಾರೆ.

***********

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲೂಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ, ಯುಪಿ ವಾರಿಯರ್ಸ್, ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ.

***********

ಹೆಚ್ಚುತ್ತಿರುವ ಪ್ರಯಾಣಿಕರ ಬೇಡಿಕೆಯನ್ನು ಪೂರೈಸಲು ಉತ್ತರ ರೈಲ್ವೆಯ ಜಮ್ಮು ವಿಭಾಗವು ನವದೆಹಲಿ ಮತ್ತು ಶ್ರೀಮಾತಾ ವೈಷ್ಣೋದೇವಿ ಕಟ್ರಾ ನಡುವಿನ ವಿಶೇಷ ಕಾಯ್ದಿರಿಸಿದ ರೈಲು ಸೇವೆಗಳನ್ನು ವಿಸ್ತರಿಸಿದೆ. ನವದೆಹಲಿಯಿಂದ ಕಟ್ರಾಗೆ ತೆರಳುವ ರೈಲು ಸಂಖ್ಯೆ ೦೪೦೮೧ ನಾಳೆಯಿಂದ ಇದೇ ೧೯ರವರೆಗೆ ನಾಲ್ಕು ಹೆಚ್ಚುವರಿ ಟ್ರಿಪ್‌ಗಳಿಗೆ ಕಾರ್ಯನಿರ್ವಹಿಸಲಿದೆ. ಅದೇ ರೀತಿ ಕಟ್ರಾದಿಂದ ನವದೆಹಲಿಗೆ ತೆರಳುವ ರೈಲು ಸಂಖ್ಯೆ ೦೪೦೮೨ ಇದೇ ೨೪ರಿಂದ ೨೭ರವರೆಗೆ ಕಾರ್ಯನಿರ್ವಹಿಸಲಿದೆ.

******END*****